# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 892 (1109)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

ವಿಷಯ : ತುಮಕೂರು ಜಿಲ್ಲೆಯಲ್ಲಿರುವ ಅಂಗನವಾಡಿಗಳ ಕುರಿತು

(ಅ) ತುಮಕೂರು ಜಿಲ್ಲೆಯಲ್ಲಿರುವ ಅಂಗನವಾಡಿಗಳ ಮತ್ತು ಮಿನಿ ಅಂಗನವಾಡಿಗಳ ಸಂಖ್ಯೆ ಎಷ್ಟು ; ಇಲ್ಲಿ ದಾಖಲಾಗಿರುವ ಮಕ್ಕಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಕಳೆದ 5 ವರ್ಷಗಳಲ್ಲಿ ತುಮಕೂರು ಜಿಲ್ಲೆಗೆ ಮಂಜೂರಾದ ಅಂಗನವಾಡಿ ಮತ್ತು ಮಿನಿ ಅಂಗನವಾಡಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ತು ಮಕೂರು ಜಿಲ್ಲೆಯಲ್ಲಿ ಯಾವ ಯಾವ ಅಂಗನವಾಡಿ ಮತ್ತು ಮಿನಿ ಅಂಗನವಾಡಿಗಳು ಸ್ವಂತ ಕಟ್ಟಡ, ಬಾಡಿಗೆ ಕಟ್ಟಡ ಮತ್ತು ಸರ್ಕಾರಿ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ಮತ್ತು ಈ ಕಟ್ಟಡಗಳು ಸುಸ್ಥಿತಿಯಲ್ಲಿವೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಇಲಾಖಾ ವತಿಯಿಂದ ಹಮ್ಮಿಕೊಳ್ಳಲಾಗಿರುವ ವಿವಿಧ ಯೋಜನೆಗಳು ಯಾವುವು ; ತುಮಕೂರು ಜಿಲ್ಲೆಯ ಎಲ್ಲಾ ತಾಲ್ಲೂಕಿನ ವ್ಯಾಪ್ತಿಯಲ್ಲಿ ಎಲ್ಲಾ ಯೋಜನೆಗಳನ್ನು ಜಾರಿಗೊಳಿಸಲಾಗಿದೆಯೇ ; (ಫಲಾನುಭವಿಗಳ ಪಟ್ಟಿ ಸಹಿತ ವಿವರ ಒದಗಿಸುವುದು)

(ಉ) ಹೊಸ ಅಂಗನವಾಡಿಗಳ ಮತ್ತು ಮಿನಿ ಅಂಗನವಾಡಿಗಳನ್ನು ತೆರೆಯಲು ನಿಗದಿಪಡಿಸಿರುವ ಮಾನದಂಡಗಳೇನು ? (ವಿವರ ನೀಡುವುದು)